## **ಕರ್ನಾಟಕ ವಿಧಾನಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 800
ಮಾನ್ಯ ಸದಸ್ಯರ ಹೆಸರು : ಶ್ರೀ ಭೀಮಾರಾವ್ ಬಸವರಾಜ ಪಾಟೀಲ್. (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13.03.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ಜಿಲ್ಲಾ ಮಟ್ಟದ ಹಾಗೂ ಗ್ರಾಮೀಣ ಮಟ್ಟದ ಪತ್ರಕರ್ತರಿಗೆ ವೃತ್ತಿ ನೈಪುಣ್ಯತೆ ಹೆಚ್ಚಿಸಲು ಕೈಗೊಂಡ ಕಾರ್ಯಕ್ರಮಗಳಾವುವು; (ಮಾಹಿತಿ ನೀಡುವುದು) | ಪ್ರಸಕ್ತ ಸಾಲಿನಲ್ಲಿ ದಿನಾಂಕ:01.07.2024ರ ಪತ್ರಿಕಾ ದಿನಾಚರಣೆಯ ಅಂಗವಾಗಿ **"ಸಾಮಾಜಿಕ ಜಾಲತಾಣ"**ದ ಬಗ್ಗೆ ಹಾಗೂ ದಿನಾಂಕ:16.11.2024ರ ರಾಷ್ಟ್ರೀಯ ಪತ್ರಿಕಾ ದಿನಾಚರಣೆಯ ಅಂಗವಾಗಿ **"ಪತ್ರಿಕಾ ಮಾಧ್ಯಮದ ಸ್ವರೂಪ"** ಕುರಿತು ಮತ್ತು ದಿನಾಂಕ:03.09.2024 ರಂದು **"ಸುಳ್ಳು ಸುದ್ದಿ ಸಾಮಾಜಿಕ ನ್ಯಾಯದ ಮೇಲೆ ಪರಿಣಾಮ"** ಕುರಿತು ಅರಿವು ಮೂಡಿಸಲು ವಿಚಾರ ಸಂಕಿರಣಗಳನ್ನು ಏರ್ಪಡಿಸಲಾಗಿದೆ.<br>ಕೋಲಾರದಲ್ಲಿ ದಿನಾಂಕ:13.02.2025 ರಂದು **"ಪತ್ರಿಕೋದ್ಯಮ ಇಂದು-ಮುಂದು"** ಎಂಬ ಶೀರ್ಷಿಕೆಯಡಿ ಆಯೋಜಿಸಲಾಗಿದ್ದ ತರಬೇತಿ ಕಾರ್ಯಾಗಾರ ಕಾರ್ಯಕ್ರಮದಲ್ಲಿ ಪತ್ರಿಕೋದ್ಯಮದ ಮಹತ್ವ, ವರದಿಗಾರಿಕೆ ಹಾಗೂ ಮಾಧ್ಯಮ ರಂಗದಲ್ಲಿ AI ತಂತ್ರಜ್ಞಾನ ಬಳಕೆ ಮುಂತಾದ ವಿಷಯಗಳ ಕುರಿತು ಗೋಷ್ಠಿಗಳನ್ನು ಏರ್ಪಡಿಸಲಾಗಿದೆ. |
| ಆ) | ಇತ್ತೀಚಿನ ದಿನಗಳಲ್ಲಿ ಪತ್ರಕರ್ತರ ಮೇಲೆ ದಾಳಿ ಮತ್ತು ಇನ್ನಿತರ ಘಟನೆಗಳು ಸಂಭವಿಸುತ್ತಿರುವುದರಿಂದ ಪತ್ರಿಕಾ/ ವಿದ್ಯುನ್ಮಾನ ಮಾಧ್ಯಮಗಳಲ್ಲಿ ನಿರ್ವಹಿಸುತ್ತಿರುವ ಸಿಬ್ಬಂದಿ/ಮಹಿಳಾ ಸಿಬ್ಬಂದಿಗಳಿಗೆ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮವೇನು: (ಮಾಹಿತಿ ನೀಡುವುದು) | ಸರ್ಕಾರವು ಮಹಿಳೆಯರ ರಕ್ಷಣೆಗೆ ಈಗಾಗಲೇ ಹಲವು ಕಾನೂನುಗಳಡಿ ರಕ್ಷಣೆ ಒದಗಿಸಲಾಗುತ್ತಿದ್ದು, ಪತ್ರಿಕಾ/ವಿದ್ಯುನ್ಮಾನ ಮಾಧ್ಯಮಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ಸಿಬ್ಬಂದಿಗಳಿಗೂ ಇದೇ ಕಾಯ್ದೆಗಳು ಅನ್ವಯಿಸುತ್ತವೆ. |
| ಇ) | ಗ್ರಾಮೀಣ ಪತ್ರಕರ್ತರಿಗೆ ವಸತಿ ಯೋಜನೆಗೆ ಸರ್ಕಾರ ಕೈಗೊಂಡ ಕ್ರಮವೇನು? (ಮಾಹಿತಿ ನೀಡುವುದು) | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಗ್ರಾಮೀಣ ಪತ್ರಕರ್ತರಿಗೆ ವಸತಿ ಯೋಜನೆಗಳನ್ನು ರೂಪಿಸಿರುವುದಿಲ್ಲ. |

**ಸಂ: ಕೆಸಿಐ-ಪಿಐಪಿ/73/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ